ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಒದಗಿಸಲಾದ ಅನುದಾನ ಕುರಿತು

ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು):-

535(613) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ರಾಜ್ಯ ಆಯವ್ಯಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಒದಗಿಸಲಾದ ಅನುದಾನ ಎಷ್ಟು ; (ಒದಗಿಸಲಾದ ಅನುದಾನ, ಬಳಕೆಯಾದ ಅನುದಾನ, ಕಾರ್ಯಕ್ರಮ, ಯೋಜನೆ, ಕಾಮಗಾರಿಗಳ ಕುರಿತಾಗಿ ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಅಭಿವೃದ್ಧಿ ಕಾಮಗಾರಿಗಳು ಮತ್ತು ಮೂಲಭೂತ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಒದಗಿಸಲಾದ ಅನುದಾನ ಎಷ್ಟು ; (ಕೈಗೊಂಡ ಕಾಮಗಾರಿ, ತಗುಲಿರುವ ವೆಚ್ಚ ಕುರಿತು ಸಂಪೂರ್ಣ ವಿವರ ಒದಗಿಸುವುದು)

(ಇ) ಸರ್ಕಾರಿ ಶಾಲೆಗಳನ್ನು ಶಾಸಕರು ಹಾಗೂ ಇತರರು ದತ್ತು ತೆಗೆದುಕೊಳ್ಳುವುದರಿಂದ ಉಳಿತಾಯವಾಗುವ ಅನುದಾನ/ಖರ್ಚು ಎಷ್ಟು ;

(ಈ) ರಾಜ್ಯದಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಕಟ್ಟಡ ಮತ್ತು ಇತರೆ ಮೂಲಭೂತ ಸೌಕರ್ಯ ಒದಗಿಸುವ ಕುರಿತಾಗಿ ಖಾಸಗಿ ಸಹಭಾಗಿತ್ವ ಇದೆಯೇ ? (ಸಂಪೂರ್ಣ ಮಾಹಿತಿ ಒದಗಿಸುವುದು)